# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1023 |
| 2 | ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ಸಚಿವರು | ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು |
| 4 | ಉತ್ತರಿಸಬೇಕಾದ ದಿನಾಂಕ | 20.08.2025 |
| | **ಪ್ರಶ್ನೆ** | **ಉತ್ತರ** |
| ಅ) | ನುಸಿ ಮತ್ತು ಕೀಟಗಳ ಹಾವಳಿಯಿಂದ ಹಿಪ್ಪುನೇರಳೆ ಸೊಪ್ಪಿನ ಗುಣಮಟ್ಟ ಹಾಳಾಗುತ್ತಿರುವುದರಿಂದ ಮತ್ತು ಕಳಪೆ ಹಾಗೂ ರೋಗ ಪೀಡಿತ ಮೊಟ್ಟೆಗಳ ಚಾಕಿಯಿಂದ ರೇಷ್ಮೆ ಹುಳುಗಳು ರೋಗಕ್ಕೆ ತುತ್ತಾಗಿ ರೇಷ್ಮೆ ಬೆಳೆಗಾರರು ಸಂಕಷ್ಟಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಇಂತಹ ಸಂದರ್ಭಗಳಲ್ಲಿ ರೇಷ್ಮೆ ಬೆಳೆಗಾರರಿಗೆ ಸರ್ಕಾರ ನೀಡುತ್ತಿರುವ ಪರಿಹಾರಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಹಿಪ್ಪುನೇರಳೆ ತೋಟಗಳಲ್ಲಿ ನುಸಿ ಮತ್ತು ಕೀಟಗಳ ಹಾವಳಿಯಿಂದ ಹಿಪ್ಪುನೇರಳೆ ಸೊಪ್ಪಿನ ಗುಣಮಟ್ಟವು ಹಾಳಾಗುವುದನ್ನು ಮತ್ತು ಕಳಪೆ ರೋಗಪೀಡಿತ ಮೊಟ್ಟೆಗಳ ಚಾಕಿಯಿಂದ ರೇಷ್ಮೆ ಹುಳುಗಳು ರೋಗಕ್ಕೆ ತುತ್ತಾಗುವುದನ್ನು ತಪ್ಪಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.<br><br>1) ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ತಲಘಟ್ಟಪುರ ಹಾಗೂ ಕೇಂದ್ರೀಯ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಮೈಸೂರಿನ ವಿಜ್ಞಾನಿಗಳನ್ನು ಆಹ್ವಾನಿಸಿ ಜಿಲ್ಲಾ / ತಾಲ್ಲೂಕು / ಗ್ರಾಮ / ಹೋಬಳಿ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಏರ್ಪಡಿಸಿ ಹಿಪ್ಪುನೇರಳೆ ಗಿಡಗಳ ಹೆಚ್ಚಿನ ಅಂತರದ ನಿರ್ವಹಣೆ ಬಗ್ಗೆ ಪ್ರಾತ್ಯಕ್ಷತೆ, ಗುಂಪು ಚರ್ಚೆ, ಕ್ಷೇತ್ರೋತ್ಸವ ನಡೆಸಿ ರೇಷ್ಮೆ ಬೆಳೆಗಾರರಿಗೆ ನುಸಿ ಮತ್ತು ಕೀಟಗಳ ಹಾವಳಿ ನಿಯಂತ್ರಣದ ಬಗ್ಗೆ ಅರಿವು ಮೂಡಿಸಲಾಗಿದೆ.<br><br>2) ಮಾಧ್ಯಮಗಳಾದ, ಸ್ಥಳೀಯ ದಿನಪತ್ರಿಕೆಗಳು, ಕರಪತ್ರಗಳು, ವೆಬಿನಾರ್, ದೂರದರ್ಶನ, ಚಂದನ ವಾಹಿನಿ ಮುಖಾಂತರ ಕೃಷಿ ದರ್ಶನ ಕಾರ್ಯಕ್ರಮಗಳ ಮೂಲಕ ವ್ಯಾಪಕವಾಗಿ ಪ್ರಚಾರ ಪಡಿಸಿ ನುಸಿ ಮತ್ತು ಕೀಟಗಳ ಸಮಗ್ರ ಹತೋಟಿ ಕ್ರಮಗಳ ಬಗ್ಗೆ ರೇಷ್ಮೆ ಬೆಳೆಗಾರರಿಗೆ ಅರಿವು ಮೂಡಿಸಲಾಗಿದೆ.<br><br>3) ಸಮಗ್ರ ಕೀಟ ನಿರ್ವಹಣಾ ಪದ್ಧತಿಗಳಾದ ಭೌತಿಕ (ವ್ಯವಸಾಯ ಪದ್ಧತಿ), ರಾಸಾಯನಿಕ ಮತ್ತು ಜೈವಿಕ ವಿಧಾನಗಳಿಂದ ಈ ಕೀಟಗಳನ್ನು ನಿಯಂತ್ರಿಸಲು ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ, ತಲಘಟ್ಟಪುರ ಮತ್ತು ಕೇಂದ್ರೀಯ |

| | | |
|---|---|---|
| | | ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಮೈಸೂರಿನ ವಿಜ್ಞಾನಿಗಳು, ರೇಷ್ಮೆ ಕೃಷಿ ವಿಭಾಗದ ಪ್ರಾಧ್ಯಾಪಕರು / ಕೀಟ ವಿಜ್ಞಾನಿಗಳು, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು ರವರುಗಳು ಶಿಫಾರಸ್ಸು ಮಾಡಿರುವ ಹತೋಟಿ ಕ್ರಮಗಳನ್ನು ಅನುಸರಿಸುವುದರ ಮೂಲಕ ಹಾವಳಿಯನ್ನು ನಿಯಂತ್ರಿಸಲು ಕ್ರಮ ಕೈಗೊಂಡಿದೆ.<br><br>4) ಕಾಲಕಾಲಕ್ಕೆ ಹಿಪ್ಪುನೇರಳೆ ತೋಟಗಳಲ್ಲಿ ಕಂಡುಬರುವಂತಹ ಕೀಟಬಾಧೆಗಳು / ರೋಗಗಳು ಮತ್ತು ರೇಷ್ಮೆ ಹುಳು ಸಾಕಾಣಿಕೆಯಲ್ಲಿ ಕಂಡುಬರುವಂತಹ ಕೀಟಬಾಧೆ / ರೋಗಗಳನ್ನು ನಿಯಂತ್ರಣ ಮಾಡಲು ಸಂಶೋಧನಾ ಸಂಸ್ಥೆಗಳ ವಿಜ್ಞಾನಿಗಳ ಸಹಯೋಗದೊಂದಿಗೆ ಗುಂಪು ಚರ್ಚೆ, ಪ್ರಾತ್ಯಕ್ಷತಾ ತರಬೇತಿ, ಕರಪತ್ರಗಳ ವಿತರಣೆ ಹಾಗೂ ಉಚಿತವಾಗಿ ಸೋಂಕು ನಿವಾರಕಗಳನ್ನು ವಿತರಿಸುವ ಮೂಲಕ ರೇಷ್ಮೆ ಹುಳುಗಳಿಗೆ ತಗಲುವ ರೋಗಗಳ ಸಮಗ್ರ ನಿಯಂತ್ರಣಕ್ಕೆ ಇಲಾಖೆಯು ನಿರಂತರವಾಗಿ ಶ್ರಮಿಸುತ್ತಿದೆ. |
| ಇ) | ಕೇಂದ್ರ ರೇಷ್ಮೆ ಮಂಡಳಿಯು ರೇಷ್ಮೆ ಕೃಷಿಗೆ ಬೆಳೆ ವಿಮೆ ಸೌಲಭ್ಯ ನೀಡುವ ಬಗ್ಗೆ ಮಾರ್ಗಸೂಚಿಗಳನ್ನು ಸಿದ್ಧಪಡಿಸಲು ರಚಿಸಿರುವ ವಿಷಯ ತಜ್ಞರ ಸಮಿತಿಯ ಅಂತಿಮ ವರದಿಯು ಸರ್ಕಾರಕ್ಕೆ ಸ್ವೀಕೃತವಾಗಿದೆಯೇ; ಸ್ವೀಕೃತವಾಗಿದ್ದಲ್ಲಿ, ಇತರೆ ಬೆಳೆಗಳಂತೆ ರೇಷ್ಮೆ ಬೆಳೆಗೂ ವಿಮಾ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರ ರೇಷ್ಮೆ ಮಂಡಳಿಯು ರೇಷ್ಮೆ ಕೃಷಿಗೆ ಬೆಳೆ ವಿಮೆ ಸೌಲಭ್ಯ ನೀಡುವ ಮಾರ್ಗಸೂಚಿಗಳನ್ನು ಸಿದ್ಧಪಡಿಸಲು ರಚಿಸಿರುವ ವಿಷಯ ತಜ್ಞರ ಸಮಿತಿಯ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದೆ. |

ಕಡತ ಸಂಖ್ಯೆ: ರೇಷ್ಮೆ 293 ರೇಇವಿ 2025

(ಕೆ. ವೆಂಕಟೇಶ)
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು